# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 159
ಸದಸ್ಯರ ಹೆಸರು : ಶ್ರೀ ಎಂ.ನಾರಾಯಣಸ್ವಾಮಿ
ಉತ್ತರಿಸುವ ದಿನಾಂಕ : 10-07-2018
ಉತ್ತರಿಸುವವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅತೀ ಹೆಚ್ಚು ಮಳೆ ಬೀಳುವ ಸಂದರ್ಭದಲ್ಲಿ ಬೆಂಗಳೂರು ನಗರದ ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಅನುದಾನದ ಕೊರತೆಯಿಂದಾಗಿ ಸಮರ್ಪಕವಾದ ನಿರ್ವಹಣೆ ಮತ್ತು ದುರಸ್ಥಿ ಕಾಮಗಾರಿಗಳ ವಿಳಂಬದಿಂದಾಗಿ ವಾಹನಗಳ ಸಂಚಾರಕ್ಕೆ ಅಡಚಣೆಯಾಗುತ್ತಿರುವುದು ನಿಜವೇ; | ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸುಮಾರು ಒಟ್ಟು 14 ಸಾವಿರ ಕಿ.ಮೀ ಉದ್ದದ ರಸ್ತೆ ಸಂಪರ್ಕವಿದ್ದು, ಅವುಗಳಲ್ಲಿ ಪ್ರಮುಖವಾಗಿ ಸುಮಾರು 1400 ಕಿ.ಮೀ ಉದ್ದದ ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳು ಅತಿ ಹೆಚ್ಚು ಮಳೆಯಿಂದಾಗಿ ಉಂಟಾಗುವ ರಸ್ತೆ ಗುಂಡಿಗಳನ್ನು ಮತ್ತು ಹಾಳಾಗಿರುವ ರಸ್ತೆ ಮೇಲ್ಮೈಯನ್ನು ದುರಸ್ಥಿಗೊಳಿಸಲು ಈ ಕೆಳಕಂಡ ಮಾದರಿಯಲ್ಲಿ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ.<br>1. ಆರ್ಟೀರಿಯಲ್, ಸಬ್-ಆರ್ಟೀರಿಯಲ್ ಮತ್ತು ಇತರೆ ಪ್ರಮುಖ ರಸ್ತೆಗಳಲ್ಲಿ ಕಳೆದ ಮೂರು ವರ್ಷಗಳಿಂದೀಚೆಗೆ ಡಾಂಬರೀಕರಣ ಮಾಡಿರುವ ರಸ್ತೆಗಳನ್ನು ನಿರ್ವಹಣಾ ಮತ್ತು ಲೋಪ ಬಾದ್ಯತಾ ಅವಧಿಯಲ್ಲಿನ ರಸ್ತೆಗಳೆಂದು ಪರಿಗಣಿಸಿ, ಈ ರಸ್ತೆಗಳಲ್ಲಿ ಉಂಟಾಗುವ ರಸ್ತೆ ಗುಂಡಿಗಳನ್ನು ಮತ್ತು ಮೇಲ್ಮೈ ದುರಸ್ಥಿಯನ್ನು ಸಂಬಂಧಪಟ್ಟ ಗುತ್ತಿಗೆದಾರರಿಂದಲೇ ಅವರ ವೆಚ್ಚದಲ್ಲಿಯೇ ದುರಸ್ಥಿಯನ್ನು ಕೈಗೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.<br>2. ನಿರ್ವಹಣಾ ಮತ್ತು ಲೋಪ ಬಾದ್ಯತಾ ಅವಧಿಯಲ್ಲಿ ಇಲ್ಲದೇ ಇರುವ ಸುಮಾರು 400 ಕಿ.ಮೀ. ಆರ್ಟೀರಿಯಲ್ ಮತ್ತು ಸಬ್-ಆರ್ಟೀರಿಯಲ್ ರಸ್ತೆಗಳನ್ನು ವಾರ್ಷಿಕ ನಿರ್ವಹಣೆ ಗುತ್ತಿಗೆ ಆಧಾರದಲ್ಲಿ ಪೈಥಾನ್ ಯಂತ್ರದ ಮೂಲಕ ದುರಸ್ಥಿ ಮಾಡಲಾಗುತ್ತಿದೆ ಹಾಗೂ 2016-17 ಮತ್ತು 2017-18ನೇ ಸಾಲಿನ ಅನುದಾನದಲ್ಲಿ ಕೈಗೊಳ್ಳಲಾಗುತ್ತಿರುವ ರಸ್ತೆಗಳ ಅಭಿವೃದ್ಧಿ ಕಾರ್ಯಗಳ ಜೊತೆಗೆ ಸದರಿ ರಸ್ತೆ ದುರಸ್ಥಿಯನ್ನು ಕೈಗೊಳ್ಳಲಾಗುತ್ತಿರುತ್ತದೆ. |

| | | |
|---|---|---|
| | | 3. ಆರ್ಟೀರಿಯಲ್, ಸಬ್–ಆರ್ಟೀರಿಯಲ್ ಮತ್ತು ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ ಎಲ್ಲಾ ರೀತಿಯ ಕ್ರಮವಹಿಸಲಾಗುತ್ತಿರುತ್ತದೆ.<br>4. ಅತಿ ಹೆಚ್ಚು ಮಳೆಯು ಕನಿಷ್ಠ ಅವಧಿಯಲ್ಲಿ ಬಿದ್ದಂತಹ ಸಮಯದಲ್ಲಿ ಮಾತ್ರ ರಸ್ತೆ ಮೇಲಿನ ನೀರು ಹರಿದು ಚರಂಡಿ ಸೇರಲು ಸಮಯ ತೆಗೆದುಕೊಳ್ಳುವುದರಿಂದ ಅಂತಹ ಸಂದರ್ಭದಲ್ಲಿ ಮಾತ್ರ ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿರುವುದು ಕಂಡುಬಂದಿರುತ್ತದೆ. |
| ಇ) | 2017–18ನೇ ಸಾಲಿನಲ್ಲಿ ಬೆಂಗಳೂರು ನಗರದ ರಸ್ತೆಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು; ಬಿಡುಗಡೆಯಾದ ಅನುದಾನದಲ್ಲಿ ಖರ್ಚಾದ ಮತ್ತು ಖರ್ಚಾಗದೇ ಉಳಿದಿರುವ ಹಣವೆಷ್ಟು, ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; (ಕಾಮಗಾರಿವಾರು ಸಂಪೂರ್ಣ ದಾಖಲೆಗಳೊಂದಿಗೆ ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ನಅಇ 185 ಎಂಎನ್‌ವೈ 2017, ದಿನಾಂಕ: 26–12–2017ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2017–18ನೇ ಸಾಲಿಗೆ ರಸ್ತೆಗಳ ಅಭಿವೃದ್ಧಿಗೆ ಸಂಬಂಧಪಟ್ಟಂತೆ ವೈಟ್‌ಟಾಪಿಂಗ್ ರಸ್ತೆ ಅಭಿವೃದ್ಧಿ, ಟೆಂಡರ್‌ಶ್ಯೂರ್ ಮಾದರಿ ರಸ್ತೆ ಅಭಿವೃದ್ಧಿ, ಹೆಚ್ಚಿನ ವಾಹನ ಸಾಂದ್ರತೆಯ ಕಾರಿಡಾರ್‌ಗಳ ಅಭಿವೃದ್ಧಿ, ಪಾದಚಾರಿ ಮಾರ್ಗ ಅಭಿವೃದ್ಧಿ, ಗ್ರೇಡ್ ಸೆಪರೇಟರ್‌ಗಳ ನಿರ್ಮಾಣ, ರೈಲ್ವೆ ಕೆಳಸೇತುವೆ/ಮೇಲುಸೇತುವೆ ನಿರ್ಮಾಣ ಮತ್ತು ಸಂಚಾರಿ ಇಂಜಿನೀಯರಿಂಗ್‌ಗೆ ಸಂಬಂಧಿಸಿದ ಹಾಗೂ ರಸ್ತೆ ಅಗಲೀಕರಣ ಕಾಮಗಾರಿಗಳಿಗೆ ಮತ್ತು ಪಾಲಿಕೆ ವ್ಯಾಪ್ತಿಯಲ್ಲಿ 1000 ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು ಒಟ್ಟು ರೂ. 2191.00 ಕೋಟಿಗಳ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆಯನ್ನು ನೀಡಲಾಗಿರುತ್ತದೆ.<br>ಪ್ರಸ್ತುತ ಯೋಜನಾ ವರದಿ ತಯಾರಿ ಮತ್ತು ಕಾಮಗಾರಿ ಟೆಂಡರ್ ಪ್ರಕ್ರಿಯೆ ಹಂತದಲ್ಲಿರುವುದರಿಂದ ಯಾವುದೇ ವೆಚ್ಚವಾಗಿರುವುದಿಲ್ಲ. |
| ಈ) | ರಸ್ತೆ ದುರಸ್ಥಿಗಳಿಗಾಗಿ ಹೆಚ್ಚಿನ ಅನುದಾನ ಬಿಡುಗಡೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಪ್ರಸಕ್ತ ಮಳೆಗಾಲದಲ್ಲಿ ನಿರ್ವಹಣಾ ಮತ್ತು ಲೋಪ ಬಾದ್ಯತಾ ಅವಧಿಯಲ್ಲಿ ಇಲ್ಲದೇ ಇರುವ ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳ ದುರಸ್ಥಿಗಾಗಿ ರೂ.60.00 ಕೋಟಿಗಳ ಹೆಚ್ಚುವರಿ ಅನುದಾನವನ್ನು ಪಾಲಿಕೆ ಆಯುಕ್ತರು ಕೋರಿದ್ದು, ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂಖ್ಯೆ: ನಅಇ 354 ಎಂಎನ್‌ವೈ 2018

(ಡಾ|| ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ